ಕರ್ನಾಟಕ ಸರ್ಕಾರ

# ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-560001

ಸಂಖ್ಯೆ:-ಸಿ3(7)ಪ್ರಾ.ಶಿ.ವರ್ಗ 01/2016-17 ದಿ: 02-10-2016

**ಜ್ಞಾಪನ**

ವಿಷಯ: 2016-17 ನೇ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರ ಕೋರಿಕೆ ಮೇರೆಗೆ ಕೌನ್ಸಿಲಿಂಗ್ ಮೂಲಕ ಅಂತರ್‌ಘಟಕ ವರ್ಗಾವಣೆ ಬಗ್ಗೆ:

******

## ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲಾ ಸಹಶಿಕ್ಷಕರ ಅಂತರ ಘಟಕ – ವರ್ಗಾವಣೆ ಕೌನ್ಸಿಲಿಂಗ್ ವೇಳಾಪಟ್ಟಿ

| ಕ್ರ ಸಂ | ದಿನಾಂಕ | ಅಂತಿಮ ಆದ್ಯತಾ ಪಟ್ಟಿಯಲ್ಲಿರುವ ಕ್ರಮಸಂಖ್ಯೆಗಳಂತೆ |
|---|---|---|
| 1 | 03-10-2016 ಸೋಮವಾರ | 1651 ರಿಂದ 1850 ರವರೆಗಿನ **ಪ್ರಾಥಮಿಕ ಶಾಲಾ** ಸಹಶಿಕ್ಷಕರು ( ನಾಲ್ಕು ವಿಭಾಗಗಳು ಸೇರಿ) |
| | | 851 ರಿಂದ 1050 ರವರೆಗಿನ **ಪ್ರೌಢಶಾಲಾ** ಸಹಶಿಕ್ಷಕರು ( ನಾಲ್ಕು ವಿಭಾಗಗಳು ಸೇರಿ) |
| 2 | 04-10-2016 ಮಂಗಳವಾರ | 1851 ರಿಂದ 2100 ರವರೆಗಿನ **ಪ್ರಾಥಮಿಕ ಶಾಲಾ** ಸಹಶಿಕ್ಷಕರು ( ನಾಲ್ಕು ವಿಭಾಗಗಳು ಸೇರಿ) |
| | | 1051 ರಿಂದ 1250 ರವರೆಗಿನ **ಪ್ರೌಢಶಾಲಾ** ಸಹಶಿಕ್ಷಕರು ( ನಾಲ್ಕು ವಿಭಾಗಗಳು ಸೇರಿ) |

**(ದೈಹಿಕ ಶಿಕ್ಷಕರು ಮತ್ತು ವಿಶೇಷ ಶಿಕ್ಷಕರುಗಳ ಕೌನ್ಸಿಲಿಂಗ್‌ನ್ನು ಸಹಶಿಕ್ಷಕರ ಕೌನ್ಸಿಲಿಂಗ್ ಮುಗಿದ ನಂತರ ಹಮ್ಮಿಕೊಳ್ಳಲಾಗುವುದು)**

**ಕೌನ್ಸಿಲಿಂಗ್ ನಡೆಯುವ ಸ್ಥಳ:**

1. **ಬೆಂಗಳೂರು ವಿಭಾಗ – ಶಿಕ್ಷಕರ ಸದನ, ಕೆಂಪೇಗೌಡ ರಸ್ತೆ, ಬೆಂಗಳೂರು -02**
2. **ಮೈಸೂರು ವಿಭಾಗ – ಸಹನಿರ್ದೇಶಕರ ಕಛೇರಿ , ಸಾ.ಶಿ.ಇಲಾಖೆ, ರಾಮಸ್ವಾಮಿ ಸರ್ಕಲ್, ಮೈಸೂರು**
3. **ಕಲಬುರಗಿ ವಿಭಾಗ – ಅಪರ ಆಯುಕ್ತರ ಕಛೇರಿ, ಸಾ.ಶಿ.ಇಲಾಖೆ ಕಲಬುರ್ಗಿ.**
4. **ಬೆಳಗಾವಿ ವಿಭಾಗ – ಅಪರ ಆಯುಕ್ತರ ಕಛೇರಿ, ಸಾ.ಶಿ.ಇಲಾಖೆ, ಡಯಟ್ ಸಭಾಂಗಣ, ಧಾರವಾಡ .**

**ಬೆಳಿಗ್ಗೆ: 09-30 ರಿಂದ ಪ್ರಾರಂಭ.**

**ಕೌನ್ಸಿಲಿಂಗ್‌ನಲ್ಲಿ ಹಾಜರಾಗುವ ಶಿಕ್ಷಕರುಗಳು ಬಿ.ಇ.ಓ ಇವರಿಂದ ಅನುಮೋದಿತ ಪ್ರತಿ ಪ್ರಕರಣಕ್ಕೆ ಸಂಬಂಧಿಸಿದ ಈ ಕೆಳಕಂಡ ದಾಖಲೆಗಳನ್ನು ಹಾಜರುಪಡಿಸುವುದು.**

1. ವರ್ಗಾವಣೆಯ ಅರ್ಜಿ ಬಿ.ಇ.ಓ ಅನುಮೋದಿತ ಪ್ರತಿ ಮತ್ತು ಸೇವಾ ದೃಢೀಕರಣ ಪತ್ರ.
2. ನೇಮಕಾತಿ ಆದೇಶ ಪತ್ರ ಮತ್ತು ಕಳೆದ ಬಾರಿ ವರ್ಗಾವಣೆ ಪಡೆದಿದ್ದಲ್ಲಿ ವರ್ಗಾವಣಾ ಆದೇಶದ ಪ್ರತಿ.
3. ಶಿಕ್ಷಕರ ಇತ್ತೀಚಿನ ಹೆಚ್.ಆರ್. ಎಂ.ಎಸ್ ವೇತನ ಪತ್ರ.
4. ಗುರುತಿನ ಪತ್ರ , ಮತದಾರರ ಚೀಟಿ, ಆಧಾರ್ ಕಾರ್ಡ್
5. ವರ್ಗಾವಣೆ ಅಧಿನಿಯಮ ಜಾರಿಗೆ ಬಂದನಂತರ ಇದೇ ಮೊದಲನೇ ಬಾರಿಗೆ ಘಟಕದ ಹೊರಗೆ ವರ್ಗಾವಣೆ ಪಡೆಯುತ್ತಿದ್ದೇನೆ ಎಂಬ ಬಗ್ಗೆ ಮುಚ್ಚಳಿಕೆ ಪತ್ರ
6. **ಪತಿ/ಪತ್ನಿ ಅನುದಾನಿತ ಸಂಸ್ಥೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಲ್ಲಿ ಹೆಚ್**.ಆರ್.ಎಂ.ಎಸ್ ವೇತನ ಪತ್ರ.
7. **ಶಿಕ್ಷಕರ ಸಂಘದ/ಸರ್ಕಾರಿ ನೌಕರರ ಸಂಘದ ಚುನಾಯಿತ ಪ್ರತಿನಿಧಿಯಾಗಿದ್ದಲ್ಲಿ ಮಾತ್ರ ಸಂಬಂಧಪಟ್ಟ ಪ್ರಾಧಿಕಾರ ನೀಡಿರುವ ಪ್ರಮಾಣ ಪತ್ರ. ಶಿಕ್ಷಕರು ಯಾವ ಘಟಕದಲ್ಲಿ ಚುನಾಯಿತರಾಗಿದ್ದಾರೆಂಬ ಬಗ್ಗೆ ದೃಢೀಕರಣ ಪತ್ರ.**
8. ಪತಿ-ಪತ್ನಿಯ ಸಂಬಂಧ ಸೂಚಿಸುವ ದಾಖಲೆ (ನಾಮನಿರ್ದೇಶನ, ಮತದಾರರ ಚೀಟಿ, ಆಧಾರ್ ಕಾರ್ಡ್)
9. ಕೆ.ಎ.ಟಿ ಯಿಂದ ಮಧ್ಯಂತರ ಆದೇಶವನ್ನು ಪಡೆದಿದ್ದಲ್ಲಿ ಎಸ್.ಎಸ್.ಎ ಸಹಶಿಕ್ಷಕರು/ಎಸ್.ಎಸ್.ಎ-ಟಿ.ಜಿ.ಟಿ ಶಿಕ್ಷಕರು ಕೌನ್ಸಿಲಿಂಗ್‌ನಲ್ಲಿ ಭಾಗವಹಿಸುವಾಗ ನ್ಯಾಯಾಲಯದ ಆದೇಶದ ದೃಢೀಕೃತ ಪ್ರತಿಯೊಂದಿಗೆ ಹಾಜರಾಗುವುದು.

ಸಹಿ/-

(ಕೆ. ಆನಂದ )

**ನಿರ್ದೇಶಕರು (ಪ್ರಾಥಮಿಕ ಶಿಕ್ಷಣ)**

ಹಾಗೂ ರಾಜ್ಯ ಮಟ್ಟದ ವರ್ಗಾವಣಾ ಪ್ರಾಧಿಕಾರಿಗಳು,